# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 03 |
| ಸದಸ್ಯರ ಹೆಸರು | : | ಶ್ರೀಮತಿ ತಾರಾ ಅನೂರಾಧ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 10/07/2018 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಪ್ರಶ್ನೆಗಳು | | ಉತ್ತರಗಳು |
|---|---|---|
| ಅ) | ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳಲ್ಲಿ ಮಳೆಯಿಂದ ಉಂಟಾಗಿರುವ ದುಸ್ಥಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ: | ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳಲ್ಲಿ ಮಳೆಯಿಂದ ಉಂಟಾಗಿರುವ ಹಾನಿಯು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಹಲವಾರು ಕಡೆಗಳಲ್ಲಿ ಗುಂಡಿಗಳು, ಅವೈಜ್ಞಾನಿಕ ರಸ್ತೆ ಹಂಪ್ಸ್‌ಗಳಿದ್ದು, ಈ ಸರ್ಕಾರ ಕೈಗೊಂಡಿರುವ ಕ್ರಮಗಳೇನು: | ರಾಜ್ಯದಲ್ಲಿಯ ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳಲ್ಲಿ ಬಿದ್ದಿರುವ ಗುಂಡಿಗಳನ್ನು ಇಲಾಖೆಗೆ ಹಂಚಿಕೆಯಾಗಿರುವ ವಾರ್ಷಿಕ ನಿರ್ವಹಣೆ ಅಡಿಯ ಅನುದಾನದಲ್ಲಿ ಮುಚ್ಚಿ ಸುಗಮ ವಾಹನ ಸಂಚಾರಕ್ಕೆ ಅನುವು ಮಾಡಿ ಕೊಡಲಾಗಿರುತ್ತದೆ. ನನ್ನ ಅಧ್ಯಕ್ಷತೆಯಲ್ಲಿ ದಿನಾಂಕ 11-06-2018 ರಂದು ನಡೆದ ಸಭೆಯಲ್ಲಿ ರಾಜ್ಯದ ರಸ್ತೆಗಳಲ್ಲಿ ಉಂಟಾಗಿರುವ ರಸ್ತೆಯ ಗುಂಡಿಗಳನ್ನು ಮುಚ್ಚುವ ಕೆಲಸಗಳನ್ನು ಒಳಗೊಂಡಂತೆ ರಸ್ತೆಯ ವಾರ್ಷಿಕ ನಿರ್ವಹಣೆಗಾಗಿ ಕ್ರಿಯಾ ಯೋಜನೆಯನ್ನು ತಯಾರಿಸಲು ಸೂಚಿಸಿದ್ದು, ಅಲ್ಲದೇ, ದಿನಾಂಕ 13/06/2018 ರಂದು ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ. ಅನುದಾನದ ಲಭ್ಯತೆಯನುಸಾರ ಆದ್ಯತೆಯ ಮೇಲೆ ಗುಂಡಿ ಮುಚ್ಚುವ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಸುಗಮ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಲಾಗುತ್ತಿದೆ., ಈ ಸಂಬಂಧ ಒಂದು ಸಮಗ್ರ ಯೋಜನೆಯನ್ನು ಸಹ ರೂಪಿಸಲಾಗಿರುತ್ತದೆ.<br><br>ರಾಜ್ಯದಲ್ಲಿ ರಾಜ್ಯ ಮತ್ತು ಜಿಲ್ಲಾ ಮುಖ್ಯ ರಸ್ತೆಗಳಲ್ಲಿ ಹಾಕಲಾಗಿದ್ದ ಅವೈಜ್ಞಾನಿಕ ರಸ್ತೆ ಉಬ್ಬುಗಳನ್ನು ತೆರವುಗೊಳಿಸಿ, ಅವಶ್ಯಕತೆ ಇರುವೆಡೆಗೆ ಅವೈಜ್ಞಾನಿಕ ರಸ್ತೆ ಉಬ್ಬುಗಳನ್ನು ಸರ್ಕಾರದ ಸುತ್ತೋಲೆ ಸಂ: ಪಿಡಬ್ಲ್ಯುಡಿ 252 ಸಿಆರ್‌ಎಂ 2010 ದಿನಾಂಕ: 24.07.2010 ರನ್ವಯ ವೈಜ್ಞಾನಿಕವಾಗಿ ರಸ್ತೆ ಉಬ್ಬುಗಳನ್ನಾಗಿ ಪರಿವರ್ತಿಸಲಾಗಿರುತ್ತದೆ.<br><br>ಅನಧಿಕೃತ ರಸ್ತೆ ಉಬ್ಬುಗಳನ್ನು ತೆರವುಗೊಳಿಸಲಾಗಿದ್ದರೂ ಸಹ ಸ್ಥಳೀಯರು ಪದೇ ಪದೇ ಅವೈಜ್ಞಾನಿಕ ರಸ್ತೆ ಉಬ್ಬುಗಳನ್ನು ನಿರ್ಮಿಸಿಕೊಳ್ಳುತ್ತಿದ್ದು, ಇವುಗಳನ್ನು ತೆರವುಗೊಳಿಸಲು ಸಹ ಕ್ರಮ ಕೈಗೊಳ್ಳಲಾಗುತ್ತಿದೆ. |

| | | |
|---|---|---|
| ಇ) | ಎಷ್ಟೋ ಕಡೆ ಸೇತುವೆಗಳು ಕೂಡ ಬಿರುಕು ಬಿಟ್ಟು ದುಸ್ಥಿತಿಯಿದ್ದು, ಹಾಳಾಗಿರುವ ಸೇತುವೆಗಳ ದುರಸ್ತಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಏನು: | ಲೋಕೋಪಯೋಗಿ ಇಲಾಖೆಯ ರಸ್ತೆಗಳಲ್ಲಿಯ ಬಿರುಕುಬಿಟ್ಟು ದುರಸ್ಥಿಯಲ್ಲಿರುವ ಸೇತುವೆಗಳನ್ನು ಗುರುತಿಸಲಾಗಿದ್ದು, ದಕ್ಷಿಣ ವಲಯದಲ್ಲಿ ಮುಖ್ಯವಾಗಿ ಹಾಳಾಗಿರುವ 15 ಸೇತುವೆಗಳನ್ನು ರೂ.782.64 ಲಕ್ಷಗಳ ಅಂದಾಜು ಮೊತ್ತದಲ್ಲಿ ದುರಸ್ಥಿಗಾಗಿ ಪ್ರಸ್ತಾವನೆ ತಯಾರಿಸಲಾಗಿರುತ್ತದೆ. ಉತ್ತರ ವಲಯಕ್ಕೆ ಸಂಬಂಧಿಸಿದಂತೆ **96** ಸೇತುವೆಗಳು ಹಾನಿಗೊಳಗಾಗಿದ್ದು, ಇವುಗಳಲ್ಲಿ ರೂ.272.73 ಲಕ್ಷಗಳಲ್ಲಿ ತುರ್ತು ದುರಸ್ಥಿ ಹಾಗೂ ರೂ.1427.30 ಲಕ್ಷಗಳ ಅಂದಾಜು ಮೊತ್ತದಲ್ಲಿ ಪುನರ್ ನಿರ್ಮಾಣ ಮಾಡುವ ಅವಶ್ಯಕತೆಯಿರುತ್ತದೆ. ಈಶಾನ್ಯ ವಲಯದಲ್ಲಿ ಮಳೆಯಿಂದ ಹಾಳಾಗಿರುವ ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳ ಮೇಲಿನ ಸೇತುವೆಗಳನ್ನು ಸಹ ಗುರುತಿಸಲಾಗುತ್ತಿದೆ ಹಾಗೂ ದುರಸ್ಥಿಪಡಿಸಬೇಕಾದ ಲೋಕೋಪಯೋಗಿ ಇಲಾಖೆಯ ರಸ್ತೆಗಳಲ್ಲಿಯ ಸೇತುವೆಗಳನ್ನು ಆಯವ್ಯಯದಲ್ಲಿ ಒದಗಿಸಲಾಗಿರುವ ಅನುದಾನದಲ್ಲಿ ಶೀಘ್ರವೆ ದುರಸ್ಥಿ/ಮರುನಿರ್ಮಾಣ ಮಾಡಿ ಸಾರ್ವಜನಿಕ ಸಂಚಾರಕ್ಕೆ ಅನುವು ಮಾಡಿಕೊಡಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಲೋಇ 61 ಸಿಕ್ಯೂಎನ್ 2018

**(ಹೆಚ್.ಡಿ.ರೇವಣ್ಣ)**
**ಲೋಕೋಪಯೋಗಿ ಸಚಿವರು**